## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2212 |
| ಸದಸ್ಯರ ಹೆಸರು | : | ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 18.03.2022. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಹಾಲಿ ಇರುವ ಗ್ರಾಮ ಪಂಚಾಯತ್ ವ್ಯವಸ್ಥೆಯಲ್ಲಿ ಗ್ರಾಮ ಪಂಚಾಯತಿಗಳ ಅಧಿಕಾರ ವ್ಯಾಪ್ತಿಯ ಬಗ್ಗೆ ಸಾಕಷ್ಟು ಗೊಂದಲಗಳಿದ್ದು, ಇದರಿಂದ ಗ್ರಾಮ ಪಂಚಾಯತ್‌ಗಳು ಆರ್ಥಿಕವಾಗಿ ಸ್ವಾವಲಂಬಿಯಾಗಲು ಸಾಧ್ಯವಾಗದೆ ಆರ್ಥಿಕ ಕುಸಿತಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿಲ್ಲ. |
| (ಆ) | ಗ್ರಾಮ ಪಂಚಾಯತ್ ವ್ಯಾಪ್ತಿಯ ಸ್ವತ್ತುಗಳು ಮತ್ತು ಇ-ಸ್ವತ್ತು ದಾಖಲೆಗಳಲ್ಲಿ ಆಗುತ್ತಿರುವ ಕ್ರಮಗಳನ್ನು ತಡೆಗಟ್ಟುವುದರ ಜೊತೆಗೆ ವ್ಯವಸ್ಥೆಯನ್ನು ಜಾರಿಗೊಳಿಸಬೇಕಾದ ಸುಧಾರಣಾ ಕ್ರಮಗಳ ಬಗ್ಗೆ ವರದಿ ನೀಡಲು ಸರ್ಕಾರದಿಂದ ಸಮಿತಿಯನ್ನು ನೇಮಕ ಮಾಡಲಾಗಿದೆಯೇ; | ಗ್ರಾಮೀಣ ಭಾಗದ ಆಸ್ತಿಗಳ ತಂತ್ರಾಂಶ ಇ-ಸ್ವತ್ತು ಹಾಗೂ ನಗರ ಆಸ್ತಿಗಳ ತಂತ್ರಾಂಶ ಇ-ಆಸ್ತಿ ಈ ಎರಡು ತಂತ್ರಾಂಶಗಳ ಅನುಷ್ಠಾನದಿಂದ ಉಂಟಾಗುತ್ತಿರುವ ಸಮಸ್ಯೆಗಳ ಕುರಿತು ಪರಿಶೀಲಿಸಿ ಪರಿಹಾರಗಳನ್ನು ಕಂಡುಕೊಳ್ಳುವ ಉದ್ದೇಶದಿಂದ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪ ಸಮಿತಿಯನ್ನು ರಚಿಸಲಾಗಿದೆ. |
| (ಇ) | ಹಾಗಿದ್ದಲ್ಲಿ, ಆ ಸಮಿತಿಯು ಯಾವ ದಿನಾಂಕದಂದು ವರದಿಯನ್ನು ಸಲ್ಲಿಸಿದೆ; | ಸಚಿವ ಸಂಪುಟದ ಉಪ ಸಮಿತಿಯು ವರದಿಯನ್ನು ಸಲ್ಲಿಸಿರುವುದಿಲ್ಲ. |
| (ಈ) | ಸಮಿತಿ ತನ್ನ ವರದಿಯಲ್ಲಿ ಮಾಡಿರುವ ಮುಖ್ಯ ಶಿಫಾರಸ್ಸುಗಳೇನು; | ಉದ್ಭವಿಸುವುದಿಲ್ಲ. |
| (ಉ) | ಸಮಿತಿಯು ಗ್ರಾಮ ಪಂಚಾಯತ್ ವ್ಯವಸ್ಥೆಯಲ್ಲಿ ಆಗಬೇಕಾಗಿರುವ ಸುಧಾರಣೆಗಳ ಕುರಿತು ಮಾಡಿರುವ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಸಚಿವ ಸಂಪುಟದ ಉಪ ಸಮಿತಿಯ ಶಿಫಾರಸ್ಸುಗಳು ಬಂದ ನಂತರ ಅಗತ್ಯ ಕ್ರಮ ವಹಿಸಲಾಗುವುದು. |

ಸಂ. ಗ್ರಾಅಪ 134 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.